ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಶನಿವಾರ, ೧೭, ಜನವರಿ, ೨೦೨೬(ಪುಷ್ಯ, ೨೭, ಶಕವರ್ಷ, ೧೯೪೭)	ಸಂಚಿಕೆ ೧೨
Volume - 161	BENGALURU, SATURDAY, 17, JANUARY, 2026(PUSHYA , 27, SHAKAVARSHA, 1947)	Issue 12

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ರಾಮಸಂದ್ರ, ಕನ್ನಳ್ಳಿ ಮತ್ತು ಕೆಂಚನಪುರ ಗ್ರಾಮದಲ್ಲಿನ ಸೂಲಿಕೆರೆ (ರಾಮಸಂದ್ರ ಹಿರಿಕೆರೆ)ಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸುಪರ್ದಿಗೆ ನೀಡುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ನಅಇ 449 ಬೆಂಆಸೇ 2016, ದಿನಾಂಕ:14.09.2016.

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯ ನಿರ್ವಹಣೆಯಲ್ಲಿರುವ 60ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿದ್ದು, ಈ ಪೈಕಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ರಾಮಸಂದ್ರ ಮತ್ತು ಕೆಂಚನಪುರ ಗ್ರಾಮದಲ್ಲಿನ ಸೂಲಿಕೆರೆ (ರಾಮಸಂದ್ರ ಹಿರಿಕೆರೆ)ಯು ಸಹ ಒಳಗೊಂಡಿರುತ್ತದೆ.

ದಿನಾಂಕ:30.09.2025ರಂದು ನಡೆದ ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿ ಸಮಿತಿಯ ಸಭೆಯಲ್ಲಿ ನಿರ್ಣಯಿಸಿರುವಂತೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ರಾಮಸಂದ್ರ, ಕನ್ನಳ್ಳಿ ಮತ್ತು ಕೆಂಚನಪುರ ಗ್ರಾಮದಲ್ಲಿನ ಸೂಲಿಕೆರೆ (ರಾಮಸಂದ್ರ ಹಿರಿಕೆರೆ)ಯು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುತ್ತಿರುವದರಿಂದ, ಸದರಿ ಕೆರೆಯ ಅಭಿವೃದ್ಧಿ ಮತ್ತು ಸಂರಕ್ಷಣೆಯ ಹಿತದೃಷ್ಟಿಯಿಂದ ಬೆಂಗಳೂರು ಪಶ್ಚಿಮ ನಗರ ಪಾಲಿಕೆಯಿಂದ (ಹಿಂದಿನ ಬಿ.ಬಿ.ಎಂ.ಪಿ) ಹಿಂಪಡೆದು, ಮುಂದಿನ ನಿರ್ವಹಣೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸುಪರ್ದಿಗೆ ನೀಡುವುದು ಸೂಕ್ತವೆಂದು ಮನಗಂಡು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 137 ಬೆಂಆಸೇ 2022(ಭಾ-1)
ಬೆಂಗಳೂರು, ದಿನಾಂಕ: 08-01-2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ರಾಮಸಂದ್ರ, ಕನ್ನಳ್ಳಿ ಮತ್ತು ಕೆಂಚನಪುರ ಗ್ರಾಮದಲ್ಲಿನ ಸೂಲಿಕೆರೆಯನ್ನು

(ರಾಮಸಂದ್ರ ಹಿರಿಕೆರೆ) ಬೆಂಗಳೂರು ಪಶ್ಚಿಮ ನಗರ ಪಾಲಿಕೆಯಿಂದ (ಹಿಂದಿನ ಬಿ.ಬಿ.ಎಂ.ಪಿ) ಹಿಂಪಡೆದು, ಮುಂದಿನ ನಿರ್ವಹಣೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸುಪರ್ದಿಗೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಜೇಶ್ ಎಸ್. ಸೂಳಿಕೇರಿ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಬಿಡಿಎ ಮತ್ತು ಬೆಂಗಳೂರು-1).

PR-15

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ಜೀವವೈವಿಧ್ಯ ಮಂಡಳಿಗೆ ಪದನಿಮಿತ್ತ ಸದಸ್ಯರುಗಳನ್ನು ನೇಮಿಸಿ ಪುನರ್ ರಚಿಸುವ ಬಗ್ಗೆ

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಅಪಜೀ 125 ಇಎನ್‌ವಿ 2003, ದಿನಾಂಕ: 19.06.2003.
2. ಸರ್ಕಾರದ ಆದೇಶ ಸಂಖ್ಯೆ: ಅಪಜೀ 203 ಇಎನ್ ವಿ 2016, ದಿನಾಂಕ: 13.02.2017.
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಅಪಜೀ 7 ಇಎನ್ ವಿ 2021, ದಿನಾಂಕ: 23.03.2021.
4. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೀವವೈವಿಧ್ಯ ಮಂಡಳಿ ಇವರ ಪತ್ರ ಸಂಖ್ಯೆ: ADM/A01/GC/148/307, ದಿನಾಂಕ: 15.09.2025.

****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಜೈವಿಕ ವೈವಿಧ್ಯ ಅಧಿನಿಯಮ, 2002 ಮತ್ತು ಕರ್ನಾಟಕ ಜೈವಿಕ ವೈವಿಧ್ಯ ನಿಯಮಗಳು, 2005ರ ಅನುಸಾರ ಕರ್ನಾಟಕ ಜೀವವೈವಿಧ್ಯ ಮಂಡಳಿಯನ್ನು ಸ್ಥಾಪಿಸಲಾಗಿದೆ.

ಅದರಂತೆ, ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಜೈವಿಕ ವೈವಿಧ್ಯ ಅಧಿನಿಯಮ, 2002 ಇದರ ನಿಯಮ 22 (4) (ಬಿ) ರ ಪ್ರಕಾರ ರಾಜ್ಯ ಸರ್ಕಾರದ ಸಂಬಂಧಪಟ್ಟ ಇಲಾಖೆಗಳನ್ನು ಪ್ರತಿನಿಧಿಸಲು ಕರ್ನಾಟಕ ಜೀವ ವೈವಿಧ್ಯ ಮಂಡಳಿಗೆ ಆರು ಪದನಿಮಿತ್ತ ಸದಸ್ಯರುಗಳನ್ನು ಹಾಗೂ ಜೈವಿಕ ವೈವಿಧ್ಯ ಅಧಿನಿಯಮ, 2002 ಇದರ ನಿಯಮ 22 (4) (ಸಿ) ರ ಅನುಸಾರ ಐದು ಅಧಿಕಾರೇತರ ಸದಸ್ಯರುಗಳನ್ನು ನೇಮಿಸಲಾಗಿರುತ್ತದೆ.

ಮುಂದುವರೆದು, ಜೈವಿಕ ವೈವಿಧ್ಯ ಅಧಿನಿಯಮ, 2002 ಕಲಂ 22 (4) (ಬಿ) ರಲ್ಲಿ ರಾಜ್ಯ ಜೀವ ವೈವಿಧ್ಯ ಮಂಡಳಿಗೆ ಐದು ಜನರಿಗಿಂತ ಹೆಚ್ಚಲ್ಲದ ಪದನಿಮಿತ್ತ ಸದಸ್ಯರನ್ನು ರಾಜ್ಯ ಸರ್ಕಾರವು ನೇಮಿಸಬೇಕಾಗಿರುವ ಹಿನ್ನೆಲೆಯಲ್ಲಿ ಮೇಲೆ ಓದಲಾದ (3) ರ ತಿದ್ದುಪಡಿ ಆದೇಶಲ್ಲಿ ಪದನಿಮಿತ್ತ ಸದಸ್ಯರುಗಳನ್ನು ಐದು ಜನಕ್ಕೆ ಸೀಮಿತಗೊಳಿಸಲಾಗಿರುತ್ತದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಮೇಲೆ ಓದಲಾದ (4)ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೀವವೈವಿಧ್ಯ ಮಂಡಳಿ ಇವರು ಜೈವಿಕ ವೈವಿಧ್ಯ (ತಿದ್ದುಪಡಿ) ಅಧಿನಿಯಮ 2023 ರನ್ವಯ ಮಂಡಳಿಗೆ ಏಳು ಜನರಿಗಿಂತ ಹೆಚ್ಚಿಲ್ಲದ ಪದನಿಮಿತ್ತ ಸದಸ್ಯರುಗಳನ್ನು ನೇಮಿಸಬೇಕಾಗಿರುವುದರಿಂದ, ದಿನಾಂಕ: 25.06.2025ರಂದು ನಡೆದ ಮಾನ್ಯ ಸಚಿವರ ಅಧ್ಯಕ್ಷತೆಯಲ್ಲಿನ ಕರ್ನಾಟಕ ಜೀವವೈವಿಧ್ಯ ಮಂಡಳಿಯ ಸಭೆಯ ನಿರ್ಣಯದಂತೆ ಜೀವವೈವಿಧ್ಯ ಮಂಡಳಿಗೆ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಕಾರ್ಯದರ್ಶಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಪದನಿಮಿತ್ತ ಸದಸ್ಯರುಗಳಾಗಿ ನೇಮಕ ಮಾಡಲು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಕರ್ನಾಟಕ ಜೀವವೈವಿಧ್ಯ ಮಂಡಳಿಗೆ ನಿಯಮಾನುಸಾರ ಪದನಿಮಿತ್ತ ಸದಸ್ಯರುಗಳನ್ನು ನೇಮಿಸಿ ಪುನರ್ ರಚಿಸಲು ತೀರ್ಮಾನಿಸಲಾಗಿದೆ. ಅದರಂತೆ ಆದೇಶ.

ಸರ್ಕಾರದ ಆದೇಶ ಸಂಖ್ಯೆ:ಅಪಜೀ 235 ಇಎನ್‌ವಿ 2025,
ಬೆಂಗಳೂರು, ದಿನಾಂಕ: 13.01.2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಜೀವವೈವಿಧ್ಯ ಮಂಡಳಿಗೆ ಜೈವಿಕ ವೈವಿಧ್ಯ (ತಿದ್ದುಪಡಿ) ಅಧಿನಿಯಮ 2023 ರ ಪ್ರಕರಣ 22 (4) (ಬಿ) ರನ್ವಯ ಈ ಕೆಳಕಂಡಂತೆ ಪದನಿಮಿತ್ತ ಸದಸ್ಯರುಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿ ಪುನರ್ ರಚಿಸಲಾಗಿದೆ.

1.	ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ	ಪದನಿಮಿತ್ತ ಸದಸ್ಯರು
2.	ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ	ಪದನಿಮಿತ್ತ ಸದಸ್ಯರು
3.	ಸರ್ಕಾರದ ಕಾರ್ಯದರ್ಶಿ (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ	ಪದನಿಮಿತ್ತ ಸದಸ್ಯರು
4.	ಸರ್ಕಾರದ ಕಾರ್ಯದರ್ಶಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ	ಪದನಿಮಿತ್ತ ಸದಸ್ಯರು
5.	ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು-560003.	ಪದನಿಮಿತ್ತ ಸದಸ್ಯರು
6.	ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ (ಆಯುಷ್), ಧನ್ವಂತರಿ ರಸ್ತೆ, ಆನಂದ್‌ರಾವ್ ವೃತ್ತ, ಬೆಂಗಳೂರು-560 009.	ಪದನಿಮಿತ್ತ ಸದಸ್ಯರು
7.	ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ಜೀವವೈವಿಧ್ಯ ಮಂಡಳಿ, ವನವಿಕಾಸ ಕಟ್ಟಡ, ಮಲ್ಲೇಶ್ವರಂ, ಬೆಂಗಳೂರು-560 003.	ಸದಸ್ಯ ಸಮಾವೇಶಕರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸದಾನಂದ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ
(ಜೀವಿಪರಿಸ್ಥಿತಿ ಮತ್ತು ಪರಿಸರ),

PR-16

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH